ರಾಜ್ಯದಲ್ಲಿ ಹಾನಿಗೊಳಗಾದ ರಸ್ತೆಗಳ ದುರಸ್ತಿ ಕುರಿತು

3083 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ಮೂರು ತಿಂಗಳುಗಳಿಂದ ಬೀಳುತ್ತಿರುವ ಮಳೆಯಿಂದಾಗಿ ಹಾನಿಗೊಳಗಾದ ಮುಖ್ಯ ರಸ್ತೆಗಳ ಸಂಖ್ಯೆ ಎಷ್ಟು?

ಆ) ದುರಸ್ತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು?

ಇ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕಿನಲ್ಲಿ ರಸ್ತೆಗಳು ಹಾನಿಗೆ ಒಳಗಾಗಿದೆ?

ಈ) ಈ ರಸ್ತೆಗಳ ದುರಸ್ತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮವು ಯಾವುವು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಇತ್ತೀಚಿನ ಅತಿವೃಷ್ಟಿಯಿಂದ ಪ್ರಸ್ತುತ ವರ್ಷದಲ್ಲಿ ರಾಜ್ಯದ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ 1508 ರಸ್ತೆಗಳು ಹಾನಿಗೊಳಗಾಗಿದೆ.

ಆ) ಈ ರಸ್ತೆಗಳ ಅತಿ ತುರ್ತು ಕಾಮಗಾರಿಗಳನ್ನು ವಾರ್ಷಿಕ ನಿರ್ವಹಣೆಯಡಿ ಕೈಗೆತ್ತಿಕೊಂಡು ಸಾಧ್ಯವಾದಷ್ಟು ಮಟ್ಟಿಗೆ ಸುಸ್ಥಿತಿಯಲ್ಲಿಡಲು ಹಾಗೂ ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೆಳಕಂಡ ತಾಲ್ಲೂಕುಗಳಲ್ಲಿ ರಸ್ತೆಗಳು ಹಾನಿಗೆ ಒಳಗಾಗಿದೆ.

1. ಮಾಗಡಿ 2. ರಾಮನಗರ 3. ನೆಲಮಂಗಲ 4. ಹೊಸಕೋಟೆ 5. ಕನಕಪುರ 6. ಚನ್ನಪಟ್ಟಣ 7. ದೇವನಹಳ್ಳಿ. 8. ದೊಡ್ಡಬಳ್ಳಾಪುರ

ಈ) ಈ ರಸ್ತೆಗಳ ದುರಸ್ತಿಗೆ ಯೋಜನೇತರ ಅನುದಾನದಲ್ಲಿ ದುರಸ್ತಿಯನ್ನು ಕೈಗೊಳ್ಳಲಾಗುತ್ತಿದೆ.

ಶಿವಗಂಗೆ ಕ್ಷೇತ್ರ ಪ್ರವಾಸಿಗರ ತಾಣವಾಗಿ ಅಭಿವೃದ್ಧಿ

3095 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಪ್ರವಾಸೋದ್ಯಮ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲ ತಾಲ್ಲೂಕು ಸೋಂಪುರ ಹೋಬಳಿ ಶಿವಗಂಗೆ ಕ್ಷೇತ್ರದಲ್ಲಿ ಪ್ರವಾಸಿಗರಿಗೆ ಯಾವುದೇ ಅನುಕೂಲ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಪ್ರವಾಸಿಗರ ತಾಣವನ್ನಾಗಿ ಅಭಿವೃದ್ಧಿಗೊಳಿಸಲು ಸರ್ಕಾರ ಏನು ಕ್ರಮಕೈಗೊಂಡಿದೆ?